2989 - ಶ್ರೀ ಹೆಚ್. ಡಿ. ಬಸವರಾಜ್ (ವಿರಾಜಪೇಟೆ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮ್ಮಿಸೊಪ್ಪಿನ ಬೆಟ್ಟ, ಬಾಣೆ ಮತ್ತು ಜಮ್ಮಾ ಭೂಮಿ ಸಕ್ರಮಗೊಳಿಸುವ ಬಗ್ಗೆ ಸರ್ಕಾರವು ಯಾವ ನಿರ್ಧಾರ ಕೈಗೊಂಡಿದೆ?

ಆ) ಹಾಗಿಲ್ಲದಿದ್ದಲ್ಲಿ ಈ ಬಗ್ಗೆ ಸಕ್ರಮಗೊಳಿಸಲು ಸರ್ಕಾರವು ಕೈಗೊಳ್ಳಲಿರುವ ಕ್ರಮವೇನು?

ಶ್ರೀ ರಮೇಶ್.ಸಿ. ಜಿಗಜಿಣಗಿ (ಕಂದಾಯ ಸಚಿವರು) :

ಅ) ಇಂತಹ ಜಮೀನುಗಳ ಸಕ್ರಮಗೊಳಿಸಲು ಬಗ್ಗೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ. ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಬುಡಕಟ್ಟು ಜನಾಂಗದವರಿಗೆ ಕೃಷಿ ಪರಿಕರಣ

2990 - ಶ್ರೀ ಹೆಚ್.ಡಿ. ಬಸವರಾಜ್ (ವಿರಾಜಪೇಟೆ) : ಮಾನ್ಯ ಕೃಷಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗಿರಿಜನ ಪ್ರದೇಶ ಯೋಜನೆಯಡಿ ಕಳೆದ ಮೂರು ಸಾಲಿನಲ್ಲಿ ಬುಡಕಟ್ಟು ಜನಾಂಗದವರಿಗೆ ಕೃಷಿ ಪರಿಕರಗಳು ಹಾಗೂ ಇತರೆ ಪರಿಕರಗಳನ್ನು ಖರೀದಿಸಲು ಎಷ್ಟು ಅನುದಾನ ನಿಗಧಿಪಡಿಸಲಾಗಿತ್ತು ಮತ್ತು ಅದರಲ್ಲಿ ಎಷ್ಟು ವೆಚ್ಚ ಮಾಡಲಾಗಿದೆ?

ಆ) ವೆಚ್ಚ ಮಾಡಲಾಗಿರುವ ಜಿಲ್ಲಾ ಮತ್ತು ತಾಲ್ಲೂಕು ಸ್ಥಳಗಳು ಯಾವು ಯಾವುದು ಮತ್ತು ಎಷ್ಟು ಫಲಾನುಭವಿಗಳು ಇದರ ಪ್ರಯೋಜನ ಪಡೆದಿರುತ್ತಾರೆ?

ಇ) ಈ ಬಾಬ್ತಿಗಾಗಿ ವೆಚ್ಚ ಮಾಡಿದ ಹಣ ಬಾಕಿ ಉಳಿದಿದ್ದರೆ ಅದರ ಮೊತ್ತ ಎಷ್ಟು ಮತ್ತು ಅದನ್ನು ಯಾವಾಗ ವೆಚ್ಚ ಮಾಡಲು ಸರ್ಕಾರ ಉದ್ದೇಶಿಸಿದೆ?

ಶ್ರೀ ಸಿ. ಬೈರೈಗೌಡ (ಕೃಷಿ ಸಚಿವರು) :

ಅ) ಕಳೆದ ಮೂರು ವರ್ಷಗಳಲ್ಲಿ ಸಸ್ಯ ಸಂಗೋಪನಾ ಗಿರಿಜನ ಉಪಯೋಜನೆಯಡಿಯಲ್ಲಿ ಬುಡಕಟ್ಟು ಜನಾಂಗದವರಿಗೆ ಕೃಷಿ ಪರಿಕರಗಳು ಹಾಗೂ ಇತರ ಪರಿಕರಗಳನ್ನು ಒದಗಿಸಲು ಒಟ್ಟು ರೂ. 267.84 ಲಕ್ಷಗಳನ್ನು ನಿಗಧಿಪಡಿಸಲಾಗಿದ್ದು ಇದರಲ್ಲಿ 237.89 ಲಕ್ಷ ರೂಗಳನ್ನು ವೆಚ್ಚ ಮಾಡಲಾಗಿರುತ್ತದೆ.

ಆ) ರಾಜ್ಯದ ಎಲ್ಲಾ ಜಿಲ್ಲೆಗಳ ಎಲ್ಲಾ ತಾಲ್ಲೂಕುಗಳಲ್ಲಿಯೂ ಈ ಯೋಜನೆಯನ್ನು ಅನುಷ್ಠಾನಗೊಳಿಸಲಾಗಿರುತ್ತದೆ. ಕಳೆದ 3 ವರ್ಷಗಳಲ್ಲಿ ಒಟ್ಟು 15497 ಫಲಾನುಭವಿಗಳು ಇದರ ಪ್ರಯೋಜನವನ್ನು ಪಡೆದಿರುತ್ತಾರೆ.

ಇ) ಈ ಬಾಬ್ತಿಗಾಗಿ ಸದರಿ ಮೂರು ವರ್ಷಗಳಲ್ಲಿ ವೆಚ್ಚ ಮಾಡದೆ ಇರುವ ಹಣ ರೂ. 29.95 ಲಕ್ಷಗಳಾಗಿದ್ದು, ಆರ್ಥಿಕ ವರ್ಗಕ್ಕೆ ಅಂತ್ಯ ಗೊಂಡಂತೆ ಲುಪ್ತವಾಗಿರುತ್ತದೆ. ಆದುದರಿಂದ ಈ ಹಣವನ್ನು ಖರ್ಚು ಮಾಡಲು ಬರುವುದಿಲ್ಲ.

ಧಾರವಾಡ ಜಿಲ್ಲೆಯಲ್ಲಿ ಹನಿ ನೀರಾವರಿ ಸಬ್ಸಿಡಿ ಹಣ ದುರುಪಯೋಗ

2991 - ಶ್ರೀ ಬಸವರಾಜು ಹೆಚ್.ಡಿ. (ವಿರಾಜಪೇಟೆ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯಲ್ಲಿ ಹನಿ ನೀರಾವರಿಗೆಂದು ನೀಡಿದ ಸಬ್ಸಿಡಿ ಹಣ ದುರುಪಯೋಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ದುರುಪಯೋಗವಾಗಿರುವ ಹಣವೆಷ್ಟು? ಹಣ ದುರುಪಯೋಗಕ್ಕೆ ಕಾರಣರಾದವರ ಮೇಲೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ (ವಿವರ ನೀಡುವುದು)

ಶ್ರೀ ಡಿ. ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ಹೌದು.

ಆ) ರೂ. 7.30 ಲಕ್ಷ ಸರ್ಕಾರಿ ಹಣ ದುರುಪಯೋಗವಾಗಿದ್ದು ಈ ಅವ್ಯವಹಾರಕ್ಕೆ ಸಂಬಂಧಿಸಿದ ಅಧಿಕಾರಿಗಳನ್ನು ಸರ್ಕಾರಿ ಹಣ ದುರುಪಯೋಗದ ಹಿನ್ನಲೆಯಡಿ ಅಮಾನತ್ತು ಗೊಳಿಸಿ ಇಲಾಖಾ ವಿಚಾರಣೆಗೆ ಕ್ರಮಕೈಗೊಂಡಿದೆ.

ರಾಜ್ಯದಲ್ಲಿ ಶೈತ್ಯಾಗಾರಗಳ ಸ್ಥಾಪನೆ

2992 - ಶ್ರೀ ಹೆಚ್.ಡಿ. ಬಸವರಾಜ್ (ವಿರಾಜಪೇಟೆ) : ಮಾನ್ಯ ತೋಟಗಾರಿಕೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 1994 ರಿಂದೀಚೆಗೆ ಎಷ್ಟು ಶೈತ್ಯಾಗಾರಗಳನ್ನು ಸ್ಥಾಪಿಸಲಾಗಿದೆ? (ಅವುಗಳ ವಿವರ ನೀಡುವುದು)

ಆ) ರಾಜ್ಯದಲ್ಲಿ ಇನ್ನೂ ಎಷ್ಟು ಕೇಂದ್ರಗಳಲ್ಲಿ ಶೈತ್ಯಾಗಾರಗಳ ಸ್ಥಾಪನೆ ಮಾಡಲಿದೆ? ಅವುಗಳಿಗೆ ಎಷ್ಟು ಹಣ ಮೀಸಲಿಡಲಾಗಿದೆ? ಹಾಗೂ ಎಷ್ಟು ಸಮಯದಲ್ಲಿ ಕೆಲಸ ಪೂರ್ಣಗೊಳಿಸಲಾಗುವುದು?

ಶ್ರೀ ಡಿ.ಟಿ. ಜಯಕುಮಾರ್ (ತೋಟಗಾರಿಕೆ ರಾಜ್ಯ ಸಚಿವರು) :

ಅ) ರಾಜ್ಯದಲ್ಲಿ 1994ರಿಂದೀಚೆಗೆ 8 ಶೈತ್ಯಾಗಾರಗಳನ್ನು ತೋಟಗಾರಿಕೆ ಉತ್ಪನ್ನಗಳ ಶೇಖರಣೆಗಾಗಿ ನಿರ್ಮಿಸಲಾಗಿದೆ. ಅವುಗಳ ವಿವರ ಕೆಳಕಂಡಂತಿದೆ :